ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
21ನೇ ಮಹಡಿ, ವಿ.ವಿಗೋಪುರ,
ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು
560001

ಕರ್ನಾಟಕ ಸರ್ಕಾರ

ದೂರವಾಣಿ:080- 22864212.
ಫ್ಯಾಕ್ಸ್: 080-22863618
Email:directorgokdom@gmail.com
Web: www.gokdom.kar.nic.in

**ಸಂಖ್ಯೆ:- ಅಸಂನಿ/ಅ/ವ.ಶಾ_ಸುತ್ತೋಲೆ/ಸಿಆರ್-30/2021-22** **ದಿನಾಂಕ:20.11.2021**

# ಸುತ್ತೋಲೆ

**ವಿಷಯ:** ಅಲ್ಪಸಂಖ್ಯಾತರ ಶಾಲಾ/ಕಾಲೇಜುಗಳಲ್ಲಿ **"ಮಕ್ಕಳ ರಕ್ಷಣಾ ಸಮಿತಿ"** ಯನ್ನು ರಚಿಸುವ ಬಗ್ಗೆ.

**ಉಲ್ಲೇಖ:**
1. ಸಮಾಜ ಕಲ್ಯಾಣ ಇಲಾಖೆಯ ಪತ್ರ ಸಂಖ್ಯೆ: 442 ಪಕವಿ 2018 ಬೆಂಗಳೂರು ದಿನಾಂಕ:15.09.2018.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆರವರ ಅಧ್ಯಕ್ಷತೆಯಲ್ಲಿ ದಿನಾಂಕ:07.06.2018 ರಂದು "ಮಕ್ಕಳ ರಕ್ಷಣಾ ನೀತಿ-2016" ಕ್ಕೆ ಸಂಬಂಧಿಸಿದಂತೆ ಚರ್ಚಿಸಲು ಕರೆದ ಸಭೆಯ ನಡವಳಿ.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ(1)ರಲ್ಲಿ ಸಮಾಜ ಕಲ್ಯಾಣ ಇಲಾಖೆಯ ಅಧೀನದ ವಸತಿ ಶಾಲೆ/ಕಾಲೇಜು & ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಮೇಲೆ ಲೈಂಗಿಕ ಕಿರುಕುಳ/ಅತ್ಯಾಚಾರ ಹಾಗೂ ದೈಹಿಕ ಹಿಂಸೆ ಸೇರಿದಂತೆ ಹಲವಾರು ಪ್ರಕರಣಗಳು ಗಣನೀಯವಾಗಿ ಸಾಮಾಜಿಕ ಮಾಧ್ಯಮಗಳಲ್ಲಿ ಮತ್ತು ಪತ್ರಿಕೆಗಳಲ್ಲಿ ಪ್ರಕಟವಾಗುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿ, ವಸತಿ ಶಾಲೆ/ಕಾಲೇಜುಗಳ ವಿದ್ಯಾರ್ಥಿಗಳ ಸುರಕ್ಷತೆಗೆ **"ಮಕ್ಕಳ ಸುರಕ್ಷಾ ಸಮಿತಿ"** ಯನ್ನು ಕಡ್ಡಾಯವಾಗಿ ರಚಿಸಲು ಸೂಚಿಸಿದೆ.

**ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016**ಯನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪ್ರಕಟಿಸಲಾಗಿದೆ. ಈ ನೀತಿಯಡಿ ರಾಜ್ಯ ಎಲ್ಲಾ ಶೈಕ್ಷಣಿಕ ಸಂಸ್ಥೆಗಳು ಮಕ್ಕಳ ರಕ್ಷಣೆಗಾಗಿ ಕೈಗೊಳ್ಳಬೇಕಾದ ಕ್ರಮಗಳು ಹಾಗೂ ಅನುಸರಿಸಬೇಕಾದ ಸಂಗತಿಗಳನ್ನು ಕುರಿತಂತೆ ಹೊರಡಿಸಲಾಗಿರುವ ನೀತಿ ನಿಯಮಗಳನ್ನು ಶಿಕ್ಷಣ ಸಂಸ್ಥೆಗಳಲ್ಲಿ ರೂಪಿಸಿಕೊಳ್ಳಲು ಸೂಚಿಸಿದೆ.

**ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016 ಹಾಗೂ ಶೈಕ್ಷಣಿಕ ಸಂಸ್ಥೆಗಳಿಗೆ ಕಾರ್ಯನಿರ್ವಹಣಾ ಮಾರ್ಗಸೂಚಿ** ಯಲ್ಲಿನ ನಿಯಮಗಳಂತೆ ಅಲ್ಪಸಂಖ್ಯಾತರ ವಸತಿ ಶಾಲೆ/ಕಾಲೇಜುಗಳಲ್ಲಿ **"ಮಕ್ಕಳ ರಕ್ಷಣಾ ಸಮಿತಿ(CPC)"** ಯನ್ನು ರಚಿಸಿಕೊಂಡು ನಿರ್ವಹಣೆ ಮಾಡಲು ಸೂಚಿಸಿದೆ.

- **ಪ್ರತಿ ಅಲ್ಪಸಂಖ್ಯಾತರ ವಸತಿ ಶಾಲೆ/ಕಾಲೇಜುಗಳಲ್ಲಿ ಕೆಳಕಂಡವರನ್ನೊಳಗೊಂಡ ಮಕ್ಕಳ ರಕ್ಷಣಾ ಸಮಿತಿಯನ್ನು ರಚಿಸುವುದು:-**

1. ಸಂಸ್ಥೆಯ ಮುಖ್ಯಸ್ಥರು ಸಮಿತಿಯ ಅಧ್ಯಕ್ಷರಾಗಿರುವುದು.
2. ಇಬ್ಬರು ಶಿಕ್ಷಕರನ್ನು ಮಕ್ಕಳ ರಕ್ಷಣಾಧಿಕಾರಿಗಳನ್ನಾಗಿ ನಿಯೋಜಿಸುವುದು.

ಪು.ತಿ.ನೋ..

3. ಶಾಲೆ/ಕಾಲೇಜುಗಳ ಸಾಮರ್ಥ್ಯದನ್ವಯ ಇಬ್ಬರು/ಮೂವರು ಪೋಷಕರಲ್ಲಿ ಒಬ್ಬ ಮಹಿಳೆ ಸಮಿತಿಯಲ್ಲಿರುವರು. ಶಾಲಾ ಆಡಳಿತ ಮಂಡಳಿ/ಪೋಷಕ-ಶಿಕ್ಷಕರ ಸಂಘವಿದ್ದಲ್ಲಿ(SMC/PTA) ಸದರಿ ಸಮಿತಿಯ ಒಬ್ಬ ಪೋಷಕರನ್ನು ಒಬ್ಬ ಸದಸ್ಯರನ್ನಾಗಿ ಸೇರಿಸಿಕೊಳ್ಳುವುದು.
4. 8ನೇ ತರಗತಿ ಅಥವಾ ಅದಕ್ಕಿಂತ ಉನ್ನತ ತರಗತಿಗಳ ಎರಡು ಅಥವಾ ಹೆಚ್ಚಿನ ವಿದ್ಯಾರ್ಥಿಗಳನ್ನು ಸಮಾನ ಲಿಂಗಾನುಪಾತದನ್ವಯ ಪ್ರತಿನಿಧಿಸುವಿಕೆ ಹೊಂದಿರುವುದು.
5. ಭದ್ರತಾ ಅಧಿಕಾರಿ(ವಸತಿ ಶಾಲೆಯು ಭದ್ರತಾ ಸಿಬ್ಬಂದಿಯನ್ನು ಹೊಂದಿದ್ದಲ್ಲಿ) ಪ್ರತಿನಿಧಿಸುವಿಕೆ ಹೊಂದಿರುವುದು.

- **<u>ಮಕ್ಕಳ ರಕ್ಷಣಾ ಸಮಿತಿಯು ನಿರ್ವಹಿಸಬೇಕಾದ ಸಾಮಾನ್ಯ ಪಾತ್ರಗಳು ಮತ್ತು ಜವಾಬ್ದಾರಿಗಳು:-</u>**

1. ಮಕ್ಕಳ ರಕ್ಷಣಾ ಸಮಿತಿಯು 3 ತಿಂಗಳಿಗೊಮ್ಮೆ ಮತ್ತು ಸುರಕ್ಷತೆ ಉಲ್ಲಂಘನೆಯಾಗಿರುವ ಬಗ್ಗೆ ವರದಿಯಾದಾಗ ಸಭೆ ಸೇರುವುದು.
2. ತ್ರೈಮಾಸಿಕ ಸಭೆಯಲ್ಲಿ ಹಿಂದಿನ ಸಭೆಯಲ್ಲಿ ಚರ್ಚಿಸಲಾದ ಕಾರ್ಯಸೂಚಿಯನ್ನು ಪರಿಶೀಲಿಸುವುದು. ಈ ಅವಧಿಯಲ್ಲಿ ಕಂಡುಬರುವ ಯಾವುದೇ ಬೆದರಿಕೆ/ಅಪಾಯಗಳು ಮತ್ತು ಶಾಲೆಗಳಲ್ಲಿ ಮಕ್ಕಳ ರಕ್ಷಣಾ ಕ್ರಮಗಳನ್ನು ಬಲಪಡಿಸಲು ತೆಗೆದುಕೊಳ್ಳಬೇಕಾಗಿರುವ ಹೆಚ್ಚುವರಿ ಕ್ರಮಗಳ ಬಗ್ಗೆ ಚರ್ಚಿಸುವುದು.
3. ಮಕ್ಕಳ ರಕ್ಷಣಾ ಸಮಿತಿಯು ಮಗುವಿನ ಸುರಕ್ಷತೆಯಡಿ ಆಗಿರುವ ಉಲ್ಲಂಘನೆಗಳು/ದುರುಪಯೋಗಗಳ ಬಗ್ಗೆ ಬಂದಿರುವ ದೂರುಗಳು/ಶಿಫಾರಸ್ಸುಗಳ ಬಗ್ಗೆ ಮಾತ್ರ ಆದ್ಯತೆ ನೀಡಬೇಕೆ ಹೊರತು ಶಾಲೆಯ ಯಾವುದೇ ಆಡಳಿತಾತ್ಮಕ ಸಮಸ್ಯೆಗಳಿಗೆ ಗಮನ ನೀಡುವಂತಿಲ್ಲ.
4. ಮಕ್ಕಳ ರಕ್ಷಣಾ ಸಮಿತಿಯು ಕಾಳಜಿಗಳ ಬಗ್ಗೆ ಚರ್ಚಿಸಿ ಅವುಗಳನ್ನು ದಾಖಲಿಸುವುದು ಮತ್ತು ಸೂಕ್ತ ಶಿಫಾರಸ್ಸುಗಳೊಂದಿಗೆ ಮುಂದಿನ ಕ್ರಮಕ್ಕಾಗಿ ವಸತಿ ಶಾಲೆ/ಕಾಲೇಜಿನ ಜಿಲ್ಲಾ ಕಛೇರಿಗೆ ಸಲ್ಲಿಸುವುದು.
5. ಮಕ್ಕಳ ರಕ್ಷಣಾ ಸಮಿತಿಯು ಗಮನಿಸಿರುವ ಕಾಳಜಿಗಳನ್ನು ಬಗೆಹರಿಸುವುದು ಮತ್ತು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸುವುದನ್ನು ಖಾತರಿ ಪಡಿಸಿಕೊಳ್ಳುವುದು.
6. ಮಕ್ಕಳ ರಕ್ಷಣೆ ಮತ್ತು ಸುರಕ್ಷತೆಗೆ ಸಂಬಂಧಿಸಿದಂತೆ ಎಲ್ಲಾ ರಿಜಿಸ್ಟಾರ್‌ಗಳು, ಕಡತಗಳು ಮತ್ತು ದಾಖಲೆಗಳನ್ನು ಮಕ್ಕಳ ರಕ್ಷಣಾ ಸಮಿತಿಯು ನಿರ್ವಹಿಸುವುದು.
7. ಅಗತ್ಯವಿದ್ದಲ್ಲಿ ಮಕ್ಕಳ ರಕ್ಷಣಾ ಸಮಿತಿಯು ಬಾಹ್ಯ ನಿಪುಣರ ಸಹಾಯವನ್ನು ಪಡೆಯುವುದು.

8. ಮಕ್ಕಳ ರಕ್ಷಣಾ ಸಮಿತಿಯ ಅವಧಿ 2 ಶೈಕ್ಷಣಿಕ ವರ್ಷಗಳಾಗಿರುತ್ತದೆ. ಖಾಲಿ ಇರುವ ಹುದ್ದೆಯನ್ನು ಒಂದು ತಿಂಗಳೊಳಗೆ ಅಥವಾ ಶೈಕ್ಷಣಿಕ ವರ್ಷದ ಆರಂಭದಲ್ಲಿ ಭರ್ತಿ ಮಾಡುವುದು. ಇವುಗಳಲ್ಲಿ ಯಾವುದು ಮೊದಲು ಅದನ್ನು ಪರಿಗಣಿಸುವುದು.
9. ಮಕ್ಕಳ ರಕ್ಷಣಾ ಸಮಿತಿಯು, ಶಿಕ್ಷಣ ಸಂಸ್ಥೆಯ ಮಕ್ಕಳ ರಕ್ಷಣಾ ನೀತಿಯಲ್ಲಿ ನಿಗಧಿಪಡಿಸಿರುವ ಮಾರ್ಗಸೂಚಿಗಳನ್ನು ಅನುಸರಿಸತಕ್ಕದ್ದು.

- **<u>ಘಟನೆಗೆ ಸಂಬಂಧಿಸಿದಂತೆ ಮಕ್ಕಳ ರಕ್ಷಣಾ ಸಮಿತಿಯ ಪಾತ್ರ ಮತ್ತು ಜವಾಬ್ದಾರಿಗಳು:–</u>**

1. ಪ್ರಕರಣ ವರದಿಯಾದಲ್ಲಿ ಮಕ್ಕಳ ರಕ್ಷಣಾ ಸಮಿತಿಯು ಅದಷ್ಟು ಬೇಗನೆ ನಿಯಮಿತ ಅನುಕರಣೆಯೊಂದಿಗೆ ಪ್ರಕರಣ ಅಂತ್ಯಗೊಳ್ಳುವವರೆಗೆ ಸಭೆ ಸೇರುವುದು ಕಾಲಂ 5 ರಲ್ಲಿ ಪರಿಶೀಲನಾ ಕಾರ್ಯವಿಧಾನಗಳನ್ನು ವಿವರಿಸಲಾಗಿದೆ.
2. ಘಟನೆಯು ವರದಿಯಾದಲ್ಲಿ ಮಕ್ಕಳ ರಕ್ಷಣಾ ಸಮಿತಿಯು ಮತ್ತು ವಸತಿ ಶಾಲೆಗಳ ಸಮಿತಿಯ ಮುಖ್ಯಸ್ಥರು ಮಕ್ಕಳ ಹಿತಾಸಕ್ತಿಯನ್ನು ಕಾಪಾಡಲು ಅವರ ಸುರಕ್ಷತೆ, ಭದ್ರತೆ, ಗೌಪ್ಯತೆ ಮತ್ತು ಏಕಾಂತತೆ ಹಕ್ಕನ್ನು ಗಮನದಲ್ಲಿಟ್ಟುಕೊಂಡು ತನಿಖೆ ನಡೆಯುವಾಗ ಪೋಲಿಸ್, ನ್ಯಾಯಾಂಗ ಮತ್ತು ಸ್ಥಳೀಯ ಆಡಳಿತದೊಂದಿಗೆ ಕಾನೂನುಗಳಲ್ಲಿ ಕಲ್ಪಿಸಿರುವ ಅವಕಾಶಗಳನ್ವಯ ಸಹಕರಿಸುವುದು.
3. ಮಕ್ಕಳ ರಕ್ಷಣಾ ಸಮಿತಿಯು ಘಟನೆಯಿಂದ ಇತರೆ ಮಕ್ಕಳು, ಅಲ್ಲಿ ಕಾರ್ಯನಿರ್ವಹಿಸುತ್ತಿರುವ ವಯಸ್ಕರು ಮತ್ತು ಶಿಕ್ಷಣ ಸಂಸ್ಥೆಯ ಮೇಲಾಗುವ ಪರಿಣಾಮಗಳನ್ನು ನಿರ್ಣಯಿಸುವುದು ಮತ್ತು ಬಗ್ಗೆ ಗಮನ ಹರಿಸುವುದು.
4. ಮಕ್ಕಳ ರಕ್ಷಣಾ ಸಮಿತಿಯು ತನ್ನ ಅನುಭವದ ಆಧಾರದ ವಿಶ್ಲೇಷಣೆಯನ್ನಾಧಿರಿಸಿ ಮಕ್ಕಳ ಮೇಲಿನ ಹಲ್ಲೆಗೆ ಅಥವಾ ನಿಂದನೆಗೆ ಕಾರಣವಾದ ಅಂಶಗಳನ್ನು ಅರ್ಥಮಾಡಿಕೊಂಡು ತನ್ನ ಜ್ಞಾನದ ಹಿನ್ನಲೆಯಲ್ಲಿ ವಸತಿ ಶಾಲೆ/ಕಾಲೇಜುಗಳಿಗೆ(ವಯಸ್ಕರು, ವಿದ್ಯಾರ್ಥಿಗಳು, ಮಕ್ಕಳು, ಆಡಳಿತ ಮಂಡಳಿ, ಸೇವಾ ಪೂರೈಕೆದಾರರು) ಪುನಶ್ಚೇತನ ತರಬೇತಿಯನ್ನು ಶಿಫಾರಸ್ಸು ಮಾಡುವುದು.

- **<u>ಅಧ್ಯಕ್ಷರು ಮತ್ತು ಮಕ್ಕಳ ರಕ್ಷಣಾಧಿಕಾರಿಗಳ ಪಾತ್ರ ಮತ್ತು ಜವಾಬ್ದಾರಿಗಳು:–</u>**

❖ **<u>ಅಧ್ಯಕ್ಷರು:–</u> <u>ಪ್ರಾಂಶುಪಾಲರು</u>/ಮಕ್ಕಳ ರಕ್ಷಣಾ ಸಮಿತಿಯ ಅಧ್ಯಕ್ಷರಾಗಿವವರು ಈ ಕೆಳಕಂಡ ಜವಾಬ್ದಾರಿಗಳನ್ನು ನಿರ್ವಹಿಸುವುದು.**

1. ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿಯಡಿ ವಸತಿ ಶಾಲೆ/ಕಾಲೇಜುಗಳ ಶ್ರೇಯೋಭಿವೃದ್ಧಿಗಾಗಿ ಮಕ್ಕಳ ರಕ್ಷಣಾ ನೀತಿಯನ್ನು ರೂಪಿಸುವುದು ಮತ್ತು ಮಾರ್ಗಸೂಚಿಗಳನ್ನು ಪಾಲಿಸುವುದು.

ಪು.ತಿ.ನೋ...